## 2. ನೂತನ 45 ರಾಜ್ಯಸಭಾ ಸದಸ್ಯರಿಂದ ಪ್ರಮಾಣ

ಇತ್ತೀಚೆಗೆ ನಡೆದ ರಾಜ್ಯಸಭೆ ಚುನಾವಣೆಯಲ್ಲಿ ಆಯ್ಕೆಯಾದ ನೂತನ 45 ಸದಸ್ಯರಿಗೆ ಉಪ ರಾಷ್ಟ್ರಪತಿ ಹಾಗೂ ಸಭಾಪತಿ ವೆಂಕಯ್ಯನಾಯ್ಡು ಅವರು ಪ್ರಮಾಣವಚನ ಬೋಧಿಸಿದರು.

46 ಸದಸ್ಯರ ಪೈಕಿ 36 ಮಂದಿ ಮೊದಲ ಬಾರಿಗೆ ರಾಜ್ಯಸಭೆ ಪ್ರವೇಶಿಸಿದ್ದಾರೆ. ಈ ಪೈಕಿ ಕಾಂಗ್ರೆಸ್ ಪಾಳಯ ತೊರೆದು ಬಿಜೆಪಿ ಸೇರಿದ ಜ್ಯೋತಿರಾದಿತ್ಯ ಸಿಂಧಿಯಾ ಮತ್ತು ಕಾಂಗ್ರೆಸ್‌ನ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಮುಖರು. ಮಧ್ಯಪ್ರದೇಶದಿಂದ ಆಯ್ಕೆಯಾದ ಸಿಂಧಿಯಾ ಅವರು ಪ್ರಮಾಣವಚನ ಸ್ವೀಕಾರಕ್ಕೂ ಮುನ್ನ ಹಿರಿಯ ಕಾಂಗ್ರೆಸ್ಸಿಗರಾದ ಖರ್ಗೆ ಮತ್ತು ದಿಗ್ವಿಜಯ್ ಅವರಿಗೆ ಶುಭಾಶಯ ಕೋರಿದ್ದು ಗಮನ ಸೆಳೆಯಿತು. ಅವರು ರಾಜ್ಯಸಭೆ ಪ್ರತಿಪಕ್ಷ ನಾಯಕ ಹಾಗೂ ಸೋನಿಯಾ ಗಾಂಧಿ ಅವರ ಆಪ್ತರಾದ ಗುಲಾಂ ನಬಿ ಅಜಾದ್ ಅವರೊಂದಿಗೆ ಕುಶಲೋಪರಿ ನಡೆಸಿದರು. ಇನ್ನು 12 ಮಂದಿ ಸದಸ್ಯರು ಮರು ಆಯ್ಕೆಯಾಗಿದ್ದು, ಆ ಪೈಕಿ ಎನ್‌ಸಿಪಿ ವರಿಷ್ಠ ಶರದ್ ಪವಾರ್, ಕಾಂಗ್ರೆಸ್ ನಾಯಕ ದಿಗ್ವಿಜಯ್ ಸಿಂಗ್, ಕೇಂದ್ರ ಸಚಿವ ರಾಮದಾಸ್ ಅಠಾವಳೆ ಪ್ರಮುಖರಾಗಿದ್ದಾರೆ. ಏತನ್ಮಧ್ಯೆ ಮೇಲ್ಮನೆ ಪ್ರವೇಶಿಸಿದ ಬಿಜೆಪಿ ನೂತನ ಸದಸ್ಯರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಒಂದು ಗಂಟೆ ಅವಧಿ ಸಂವಾದ ನಡೆಸಿದರು. ಸದನದ ಸದಸ್ಯರಾಗಿ ಆದರ್ಶ ನಡೆ ಅನುಸರಿಸುವಂತೆ ಕಿವಿ ಮಾತು ಹೇಳಿದರು.

**ಘನತೆಗೆ ಧಕ್ಕೆ ಬೇಡ ನಿಯಮ ಪಾಲಿಸಿ:–** "ಕಲಾಪಗಳಲ್ಲಿ ಶಿಸ್ತು ಪಾಲನೆ ಬಹಳ ಮುಖ್ಯ, ನಿಮ್ಮ ಯಾವುದೇ ವರ್ತನೆ ರಾಜ್ಯಸಭೆಯ ಘನತೆಗೆ ಧಕ್ಕೆ ತರದಂತೆ ಎಚ್ಚರಿಕೆ ವಹಿಸಿರಿ," ಎಂದು ವೆಂಕಯ್ಯ ನಾಯ್ಡು ಸದಸ್ಯರಿಗೆ ಕಿವಿಮಾತು ಹೇಳಿದ್ದಾರೆ.

ರಾಜ್ಯಸಭಾ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಗೊಂಡ ಮಲ್ಲಿಕಾರ್ಜುನ ಖರ್ಗೆ ಮತ್ತು ನಾಮಕರಣಗೊಂಡ ಬೆಳಗಾವಿ ಜಿಲ್ಲೆ ಮೂಡಲಗಿಯ ಈರಣ್ಣ ಕಡಾಡಿ ಅವರು ಕನ್ನಡದಲ್ಲಿಯೇ ಪ್ರಮಾಣ ವಚನ ಸ್ವೀಕರಿಸಿ ಗಮನ ಸೆಳೆದರು.

ಪ್ರಮಾಣ ವಚನ ಸ್ವೀಕಾರದ ಬಳಿಕ ಸ್ವತಃ ಹಿರಿಯ ಮುತ್ಸದ್ದಿ ಖರ್ಗೆ ಅವರು ಟ್ವೀಟ್ ಮಾಡಿ ರಾಜ್ಯದ ಜನತೆ ಸೇರಿದಂತೆ ಪಕ್ಷದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ತಮಗೆ ಸಹಕಾರ ನೀಡಿದ ಎಲ್ಲರಿಗೆ ಧನ್ಯವಾದ ಸಲ್ಲಿಸಿ, ರಾಜ್ಯದ ಶ್ರೇಯೋಭಿವೃದ್ಧಿಗೆ ತಮಗೆ ದೊರೆತಿರುವ ಅವಕಾಶ ಬಳಕೆ ಮಾಡುವುದಾಗಿ ಹೇಳಿರುವ ಅವರು, ಮುಂದಿನ ಪಯಣದಲ್ಲಿ ಎಲ್ಲರ ಹಾರೈಕೆ ತಮಗೆ ಬೇಕಿದೆ ಎಂದು ಅವರು ಬರೆದುಕೊಂಡಿದ್ದಾರೆ.

ಕನ್ನಡದಲ್ಲೇ ಪ್ರಮಾಣವಚನ ಸ್ವೀಕರಿಸಿದ ಈರಣ್ಣ ಕಡಾಡಿ ಅವರ ಈ ಕ್ರಮಕ್ಕೆ ಬೆಳಗಾವಿಯ ಕನ್ನಡ ಸಂಘಟನೆಗಳು ಹರ್ಷ ವ್ಯಕ್ತಪಡಿಸಿವೆ. ಬಿಜೆಪಿ ವಿಭಾಗೀಯ ಪ್ರಮುಖರಾಗಿದ್ದ ಈರಣ್ಣ ಕಡಾಡಿ ಅವರಿಗೆ ಬಿಜೆಪಿ ಹೈಕಮಾಂಡ್ ರಾಜ್ಯಸಭೆ ಟಿಕೆಟ್ ಕೊಟ್ಟಿತ್ತು. ನಿರೀಕ್ಷೆಯಂತೆ ಅವರು ಅವಿರೋಧವಾಗಿ ಆಯ್ಕೆಯಾಗಿದ್ದರು. ಸಭಾಧ್ಯಕ್ಷರಾಗಿದ್ದ ಉಪ ರಾಷ್ಟ್ರಪತಿ ವೆಂಕಯ್ಯ ನಾಯ್ಡು ಪ್ರಮಾಣವಚನ ಬೋಧಿಸಿದ್ದರು.

ಆಧಾರ:ವಿಜಯಕರ್ನಾಟಕ, ದಿನಾಂಕ:23.07.2020